ಕರ್ನಾಟಕ ಸರ್ಕಾರ
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಸಂಖ್ಯೆ: ಯುಸೇಇ/ರಾಸೇಯೋ/ 17/2025-26/492

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 20.01.2026

ಇವರಿಗೆ,
ಕುಲಸಚಿವರುಗಳು,
ರಾಷ್ಟ್ರೀಯ ಸೇವಾ ಯೋಜನೆಯ ಅನುಷ್ಠಾನದಲ್ಲಿರುವ,
ಎಲ್ಲಾ ವಿಶ್ವವಿದ್ಯಾಲಯ/ನಿರ್ದೇಶನಾಲಯಗಳು.

"ಪ್ರಾಮುಖ್ಯತೆ"

ಮಾನ್ಯರೇ,

ವಿಷಯ: ಎನ್.ಎಸ್.ಎಸ್. ಅನುಷ್ಠಾನಗೊಂಡಿರುವ 680 ಸರ್ಕಾರಿ ಪ್ರೌಢಶಾಲೆಗಳನ್ನು ದತ್ತು ಪಡೆಯುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಸರ್ಕಾರವು ದೇಶದಲ್ಲೇ ಅಪೂರ್ವ ಎನ್ನುವಂತೆ 2018-19ನೇ ಸಾಲಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆಯನ್ನು ಪ್ರೌಢ ಶಾಲೆಗಳಲ್ಲಿ ವಿಸ್ತರಿಸುವ ಹೆಮ್ಮೆಯ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಅದರಂತೆ, ವಿದ್ಯಾರ್ಥಿಗಳಿಗೆ ಸಮಾಜ ಪರತೆ ಮತ್ತು ಸೇವಾ ಮನೋಭಾವ ಮೂಡಿಸಲೆಂದು ವಿಶ್ವವಿದ್ಯಾಲಯ/ನಿರ್ದೇಶನಾಲಯ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳಲ್ಲಿ ಆರಂಭವಾಗಿದ್ದ ರಾಷ್ಟ್ರೀಯ ಸೇವಾ ಯೋಜನೆಯನ್ನು ಸರ್ಕಾರಿ ಪ್ರೌಢಶಾಲೆಗಳಿಗೂ ಸರ್ಕಾರವೂ ವಿಸ್ತರಿಸಿದೆ.

ಮುಂದುವರೆದು, ಸದರಿ ಯೋಜನೆಯನ್ನು ಪ್ರೌಢ ಶಾಲೆಗಳ 8ನೇ ಮತ್ತು 9ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವವ ವಿದ್ಯಾರ್ಥಿಗಳಿಗಾಗಿ ರಾಷ್ಟ್ರೀಯ ಸೇವಾ ಯೋಜನೆಯನ್ನು ರಾಜ್ಯದ 34 ಶೈಕ್ಷಣಿಕ ಜಿಲ್ಲೆಗಳಿಗೆ ವಿಸ್ತರಿಸಿ, ಪ್ರತಿ ಜಿಲ್ಲೆಗೆ 20 ಶಾಲೆಗಳಂತೆ ಒಟ್ಟು 680 ಶಾಲೆಗಳಲ್ಲಿ ರಾಷ್ಟ್ರೀಯ ಸೇವಾ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. (ಶಾಲೆಗಳ ವಿವರ ಪ್ರತಿ ಲಗತ್ತಿಸಿದೆ)

ಆದ್ದರಿಂದ, **ತಮ್ಮ ವಿಶ್ವವಿದ್ಯಾಲಯ/ನಿರ್ದೇಶನಾಲಯಗಳ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಆಸಕ್ತ ಶೈಕ್ಷಣಿಕ ಸಂಸ್ಥೆಗಳ ಮೂಲಕ ತಮಗೆ ಸಂಬಂಧಿಸಿದ ರಾಜ್ಯದ 34 ಶೈಕ್ಷಣಿಕ ಜಿಲ್ಲೆಗಳ ಪೈಕಿ ಒಂದು ಜಿಲ್ಲೆಗೆ 20 ಶಾಲೆಗಳನ್ನು ದತ್ತು ಪಡೆದುಕೊಳ್ಳುವ ಪ್ರಸ್ತಾವನೆಯನ್ನು ರಾಜ್ಯ ಎನ್.ಎಸ್.ಎಸ್. ಕೋಶ ಸಲ್ಲಿಸುವಂತೆ** ಈ ಮೂಲಕ ಕೋರಿದೆ.

<u>ಯೋಜನೆಯ ಅನುಷ್ಠಾನ ಪ್ರಕ್ರಿಯೆ:-</u>

- ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿ ಪಡೆಸುವ ಹಾಗೂ ಉತ್ತೇಜಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.
- ಸರ್ಕಾರಿ ಪ್ರೌಢಶಾಲೆಗಳಲ್ಲಿ ಶಿಕ್ಷಣ ಮಟ್ಟವನ್ನು ಸುಧಾರಿಸುವುದು.
- ವಿಶ್ವಾಸಾರ್ಹ NGO ಸಂಸ್ಥೆಗಳ ಸಹಯೋಗದೊಂದಿಗೆ ಶಾಲೆಗಳಲ್ಲಿ ಅರಿವು ಕಾರ್ಯಕ್ರಮಗಳನ್ನು ಆಯೋಜಿಸುವುದು.
- ಸರ್ಕಾರಿ ಪ್ರೌಢಶಾಲೆಗಳಲ್ಲಿ ಮೂಲಭೂತ ಸೌಕರ್ಯ ಸುಧಾರಿಸುವುದು.
- ಸರ್ಕಾರಿ ಪ್ರೌಢಶಾಲೆಗಳಲ್ಲಿ Basic English ಕಲಿಕೆಯ ಬಗ್ಗೆ ಗಮನ ಹರಿಸುವುದು.
- ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಡಿಮೆ ಅಂಕ ಪಡೆದು ಉತ್ತೀರ್ಣರಾಗುವ ವಿದ್ಯಾರ್ಥಿಗಳನ್ನು ಹೆಚ್ಚಿನ ಅಂಕ ಪಡೆಯಲು ಉತ್ತೇಜಿಸುವುದು.

- ಸರ್ಕಾರಿ ಪ್ರೌಢಶಾಲೆಗಳಲ್ಲಿ ಗಣಕ ಯಂತ್ರಗಳ ಕಲಿಕೆ ಬಗ್ಗೆ ತರಬೇತಿ ನೀಡುವುದು.
- ಇನ್ನಿತರ ಉಪಯುಕ್ತ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.
- ಸದರಿ ಮಹತ್ವದ ಯೋಜನೆಯಡಿಯಲ್ಲಿ ವಿಶ್ವವಿದ್ಯಾಲಯ/ನಿರ್ದೇಶನಾಲಯಗಳು ಮತ್ತು ಶೈಕ್ಷಣಿಕ ಸಂಸ್ಥೆಗಳು ಶಾಲೆಗಳನ್ನು ದತ್ತು ಪಡೆದುಕೊಳ್ಳುವುದು ಹೆಮ್ಮೆಯ ವಿಷಯವಾಗಿದೆ

ಸೂಚನೆ: ಎನ್.ಎಸ್.ಎಸ್. ಅನುಷ್ಠಾನಗೊಂಡಿರುವ 680 ಸರ್ಕಾರಿ ಪ್ರೌಢಶಾಲೆಗಳನ್ನು ದತ್ತು ಪಡೆಯುವ ವಿಶ್ವವಿದ್ಯಾಲಯ/ನಿರ್ದೇಶನಾಲಯಗಳಿಗೆ ರಾಜ್ಯ ಎನ್.ಎಸ್.ಎಸ್. ಕೋಶದಿಂದ ಅನುದಾನ ನೀಡಲಾಗುವುದು.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(ಡಾ. ಪ್ರತಾಪ್ ಲಿಂಗಯ್ಯ)
ರಾಜ್ಯ ಎನ್.ಎಸ್.ಎಸ್. ಅಧಿಕಾರಿ,
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

ಪ್ರತಿ: 1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಸರ್ಕಾರ.
2. ಪ್ರಾದೇಶಿಕ ನಿರ್ದೇಶಕರು, ಎನ್.ಎಸ್.ಎಸ್. ಪ್ರಾದೇಶಿಕ ಕಛೇರಿ, ಭಾರತ ಸರ್ಕಾರ.
3. ಕಾರ್ಯಕ್ರಮ ಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನೆಯ ಅನುಷ್ಠಾನದಲ್ಲಿರುವ, ಎಲ್ಲಾ ವಿಶ್ವವಿದ್ಯಾಲಯ/ನಿರ್ದೇಶನಾಲಯಗಳು.